**ಕರ್ನಾಟಕ ಸರ್ಕಾರ**

ಸಂಖ್ಯೆ : ಕಂಇ 158 ಟಿ.ಎನ್.ಆರ್. 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು. ದಿನಾಂಕ: 28.06.2020

## ಆದೇಶ

ಕೇಂದ್ರ ಗೃಹ ಮಂತ್ರಾಲಯದ ಆದೇಶ ಸಂಖ್ಯೆ: 40-3/2020-ಡಿ.ಎಂ.-ಐ(ಎ) ದಿನಾಂಕ: 30.05.2020ರಲ್ಲಿ ಕಂಟೈನ್ಮೆಂಟ್ ವಲಯಗಳಲ್ಲಿ ಲಾಕ್ ಡೌನ್ ಅನ್ನು ದಿನಾಂಕ: 30.06.2020ರವರೆಗೆ ವಿಸ್ತರಿಸಿದೆ. ಮತ್ತು ಕಂಟೈನ್ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತ ಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಲಾಕ್ ಡೌನ್ ಸಡಿಲಿಕೆಯ (ತೆರವು-1)ರ ಬಗ್ಗೆ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ. ತತ್ಪರಿಣಾಮವಾಗಿ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: 158 ಟಿ.ಎನ್.ಆರ್. 2020 ದಿನಾಂಕ : 30.05.2020ರಲ್ಲಿ ಕಂಟೈನ್ಮೆಂಟ್ ವಲಯಗಳಲ್ಲಿ ಲಾಕ್ ಡೌನ್ ಅನ್ನು ದಿನಾಂಕ : 30.06.2020ರವರೆಗೆ ವಿಸ್ತರಿಸಿದೆ. ಕಂಟೈನ್ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತ ಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಮಾರ್ಗಸೂಚಿಗಳನ್ನು ಹೊರಡಿಸಿದೆ. ಈ ಮಾರ್ಗಸೂಚಿಗಳು ದಿನಾಂಕ: 30.06.2020ರವರೆಗೆ ಜಾರಿಯಲ್ಲಿರುತ್ತವೆ.

ರಾಜ್ಯದಲ್ಲಿ ಕೋವಿಡ್-19 ಸೋಂಕು ಪ್ರಕರಣಗಳು ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಪರಿಸ್ಥಿತಿಯನ್ನು ಪರಾಮರ್ಶಿಸಿ ಸರ್ಕಾರವು ಈ ಸೋಂಕನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಹಾಗೂ ಹೆಚ್ಚಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧವಾಗಿ ಹಾಲಿ ಚಾಲ್ತಿಯಲ್ಲಿರುವ ಮುಂಜಾಗ್ರತಾ ಕ್ರಮಗಳ ಜೊತೆಗೆ ಇನ್ನೂ ಹೆಚ್ಚಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವುದು ಅತ್ಯವಶ್ಯವೆಂದು ನಿರ್ಧರಿಸಿದೆ.

ಅದರಂತೆ, ವಿಪತ್ತು ನಿರ್ವಹಣಾ ಕಾಯ್ದೆ, 2005ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಬಗ್ಗೆ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿ.ಎನ್.ಆರ್. 2020 ದಿನಾಂಕ: 30.05.2020ರಲ್ಲಿ ಹೊರಡಿಸಿದ ಮಾರ್ಗಸೂಚಿಗಳಿಗೆ ಈ ಕೆಳಕಂಡ ಸೇರ್ಪಡೆ ಹಾಗೂ ತಿದ್ದುಪಡಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಜಾರಿಗೊಳಿಸಿರುತ್ತೇನೆ :

**ಸೇರ್ಪಡೆ :**

1. ದಿನಾಂಕ:05.07.2020ರ ಭಾನುವಾರದಿಂದ ಮುಂದಿನ ನಾಲ್ಕು ಭಾನುವಾರಗಳು ಅಂದರೆ ದಿನಾಂಕ:02.08.2020ರವರೆಗಿನ ಎಲ್ಲಾ ಭಾನುವಾರಗಳಂದು ಪೂರ್ಣ ದಿನದ ಲಾಕ್ ಡೌನ್ ಇರತಕ್ಕದ್ದು. ಆದರೆ, ಅಗತ್ಯ ಸರಕು ಸರಂಜಾಮುಗಳ ಸಾಗಾಣಿಕೆಗೆ ಯಾವುದೇ ನಿರ್ಬಂಧವಿರುವುದಿಲ್ಲ.
2. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು, ಕಚೇರಿಗಳು, ಬೋರ್ಡುಗಳು ಮತ್ತು ಕಾರ್ಪೋರೇಷನ್ನುಗಳು, (ತುರ್ತು ಮತ್ತು ಅಗತ್ಯ ಸೇವೆಗಳನ್ನು ಒದಗಿಸುವಂತಹ ಇಲಾಖೆಗಳು, ಕಚೇರಿಗಳು, ಬೋರ್ಡುಗಳು ಮತ್ತು ಕಾರ್ಪೋರೇಷನ್ನುಗಳನ್ನು ಹೊರತುಪಡಿಸಿ) ಈಗಿರುವ ಎರಡನೇ ಶನಿವಾರ ಮತ್ತು ನಾಲ್ಕನೇ ಶನಿವಾರಗಳನ್ನು ಸೇರಿಸಿಕೊಂಡಂತೆ 2020ರ ಜುಲೈ 10 ರಿಂದ ಎಲ್ಲಾ ಶನಿವಾರಗಳಂದು, ದಿನಾಂಕ: 08.08.2020ರವರೆಗೆ ಮುಚ್ಚಲ್ಪಡುತ್ತವೆ.

ಪು.ತಿ.ನೋ.

Scanned with CamScanner

**ಬದಲಾವಣೆ :**

1. ರಾಜ್ಯಾದ್ಯಂತ ರಾತ್ರಿ 8 ರಿಂದ ಬೆಳಿಗ್ಗೆ 5 ರವರೆಗೆ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ. ಈ ಕರ್ಫ್ಯೂ ಅವಧಿಯಲ್ಲಿ ಅತ್ಯಗತ್ಯ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದಂತೆ ವ್ಯಕ್ತಿಗಳ ಚಲನೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ತಮವಿಜಯಭಾಸ್ಕರ್

**(ತ.ಮ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

Scanned with CamScanner